ಆ) ದಂಪತಿಗಳಿಬ್ಬರೂ ರಾಜ್ಯ ಸರ್ಕಾರಿ ನೌಕರರಾಗಿದ್ದಲ್ಲಿ ಒಬ್ಬರಿಗೆ ಮಾತ್ರ ಆದರ ಸೌಲಭ್ಯ ನೀಡಲಾಗುತ್ತಿದೆ ಎಂಬ ಹೇಳಿಕೆ ಸರಿಯಲ್ಲ. ಆದ್ದರಿಂದ ಈ ಬಗ್ಗೆ ಕಾರಣಗಳನ್ನು ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ನಿಜವಲ್ಲ.

ಈ) ಈ) ನಲ್ಲಿ ಹೇಳಲಾದ ಉತ್ತರದಿಂದಾಗಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಷ್ಟ್ರೀಯ ಹೆದ್ದಾರಿಯಲ್ಲಿ ಕೈಗಾರಿಕೆಯನ್ನು ಸ್ಥಾಪನೆ.

೧೧೯೫. ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ).—ಮಾನ್ಯ ಕೈಗಾರಿಕಾ ಸಚಿವರ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ರಾಷ್ಟ್ರೀಯ ಹೆದ್ದಾರಿಗಳಲ್ಲಿ ಕೈಗಾರಿಕೆಗಳನ್ನು ನಿರ್ಮಿಸುವ ಯೋಜನೆ ಸರ್ಕಾರಕ್ಕಿದೆಯೇ ?

ಆ) ಇದ್ದರೆ ಬೆಂಗಳೂರು ಮಂಗಳೂರು ಹೆದ್ದಾರಿಯಲ್ಲಿ ಯಾವ ಯಾವ ಕೈಗಾರಿಕೆಯನ್ನು ಸ್ಥಾಪಿಸುವ ಉದ್ದೇಶವಿದೆಯೇ ?

ಇ) ಹಿಂದುಳಿದ ತಾಲ್ಲೂಕುಗಳು ರಾಷ್ಟ್ರೀಯ ಹೆದ್ದಾರಿಯಲ್ಲಿದ್ದರೆ ಅಂತಹವುಗಳನ್ನು ಆಯ್ಕೆ ಮಾಡಿಕೊಂಡು ಲಭ್ಯವಿರುವ ಕಚ್ಚಾ ಪದಾರ್ಥಗಳಿಗನುಗುಣವಾಗಿ ಸರ್ಕಾರದ ವತಿಯಿಂದ ಕೈಗಾರಿಕೆಗಳನ್ನು ಸ್ಥಾಪಿಸಲಾಗುವುದೇ ?

ಶ್ರೀ ಎಸ್. ಎಂ. ಯಾಹ್ಯ (ಕೈಗಾರಿಕಾ ಸಚಿವರು)

ಅ) ಸರ್ಕಾರದ ವತಿಯಿಂದ ಕೈಗಾರಿಕೆಗಳನ್ನು ಸ್ಥಾಪಿಸುವ ಯೋಜನೆ ಇರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಇ) ಸರ್ಕಾರದ ವತಿಯಿಂದ ಯಾವುದು ಇರುವುದಿಲ್ಲ.

ರಾಯಚೂರು ಥರ್ಮಲ್ ವಿದ್ಯುತ್ ಘಟಕ

೯೮೯. ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ).—ಮಾನ್ಯ ಕೈಗಾರಿಕೆ, ಇಂಧನ ಹಾಗೂ ವಾಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಯಚೂರು ಶಾಖೋತ್ಪನ್ನ ವಿದ್ಯುತ್ ಘಟಕದ ಉತ್ಪಾದನಾ ಸಾಮರ್ಥ್ಯವೆಷ್ಟು ?

ಆ) ೩೧ ಮೇ ೧೯೯೦ರಂದು ವೈಲ್ಕಂಡ ಘಟಕದಲ್ಲಿ ಉತ್ಪಾದನೆಯಾಗುತ್ತಿದ್ದ ವಿದ್ಯುತ್‌ನ ಪ್ರಮಾಣವೆಷ್ಟು ?

ಇ) ಮೇಲ್ಕಂಡ ಥರ್ಮಲ್ ಘಟಕದಲ್ಲಿ ವಿದ್ಯುತ್ ಉತ್ಪಾದನೆಯಲ್ಲಿ ಕಡಿತ ಉಂಟಾಗಲು ಕಾರಣವೇನು ?

ಶ್ರೀ ಎಸ್.ಎಂ. ಯಾಹ್ಯ (ಕೈಗಾರಿಕೆ ಇಂಧನ ಹಾಗೂ ವಕ್ಫ್ ಸಚಿವರು).—

ಅ) ರಾಯಚೂರು ಶಾಖೋತ್ಪನ್ನ ವಿದ್ಯುತ್ ಕೇಂದ್ರದಲ್ಲಿ ೨೧೦ ಮೆ.ವಾ.ನ ೨ ಘಟಕಗಳು ಇವೆ. ಪ್ರತಿ ಘಟಕವು ಒಂದು ದಿವಸಕ್ಕೆ ೫ ಮಿ.ಯು ಉತ್ಪಾದಿಸುವ ಸಾಮರ್ಥ್ಯವನ್ನು ಹೊಂದಿದೆ.

ಆ) ೩೧ ಮೇ ೧೯೯೦ರಂದು ರಾಯಚೂರು ಶಾಖೋತ್ಪನ್ನ ವಿದ್ಯುತ್ ಕೇಂದ್ರದಲ್ಲಿ ೯.೦೨ ದಶಲಕ್ಷ ಯುನಿಟ್ ವಿದ್ಯುತ್ ಉತ್ಪಾದಿಸಲಾಗಿತ್ತು.

ಇ) ಸಿಂಗರೇಲಿ ಮತ್ತು ವೆಸ್ಟರ್ನ್ ಕೋಲ್ ಫೀಲ್ಡ್‌ನಿಂದ ಸಮರ್ಪಕವಾಗಿ ಕಲ್ಲಿದ್ದಲು ಸರಬರಾಜು ಆಗದೇ ಇರುವುದರಿಂದ ವಿದ್ಯುತ್ ಉತ್ಪಾದನೆಯಲ್ಲಿ ಕಡಿತ ಉಂಟಾಯಿತು